ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ

**Karnataka State Rural Development and Panchayat Raj University**

ರೈತ ಭವನ, ಜನರಲ್‌ಕಾರ್ಯಪ್ಪ ವೃತ್ತ, ಗದಗ– 582 101

RaithaBhavana, General Cariappa Circle, Gadag – 582 101

E-mail: ksrdpruadmissions@gmail.com Phone: 08372-230338, Fax: 08372-297343

Special Lecture on "Ambedkar and Nationality" by Shri. Shridhar Nadiger published in various Kannada Daily Newspapers. Date:19/04/2021

## ಅಂಬೇಡ್ಕರ ಒಂದು ವರ್ಗಕ್ಕೆ ಸೀಮಿತ ಅಲ್ಲ



**ಗದಗ, ೧೮ :** ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ಯ ವಿಶ್ವವಿದ್ಯಾಲಯದಲ್ಲಿ ಸಂವಿಧಾನ ಶಿಲ್ಪಿ ಡಾ. ಬಾಬಸಾಹೇಬ ಅಂಬೇಡ್ಕರ್‌ವರ ೧೩೦ನೇ ಜಯಂತಿಯ ವಿಶೇಷ ಉಪನ್ಯಾಸವನ್ನು ಜರುಗಿಸಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಶ್ರೀಧರ ನಾಡಗೇರ್ ಅವರು ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನಗಳನ್ನು ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಡಾ. ಅಂಬೇಡ್ಕರ್ ಅವರು ಬಹುಮುಖ ಹಾಗೂ ಪರಿಪೂರ್ಣ ವ್ಯಕ್ತಿತ್ವದವರು ಮತ್ತು ಈ ದೇಶ ಕಂಡ ಮಹಾನ್ ಸಮಾಜ ಸುಧಾರಣೆಯ ಹರಿಕಾರು. ಅಂಬೇಡ್ಕರ್‌ಅವರನ್ನು ಕೇವಲ ಒಂದು ವರ್ಗಕ್ಕೆ ಸೀಮಿತಗೊಳಿಸದೆ, ಅವರು ದೇಶಕ್ಕೆ ನೀಡಿದ ಕೊಡುಗೆಯನ್ನು ಸಾರ್ವತ್ರೀಕವಾಗಿ ಅರ್ಥೈಸುವುದು ಪ್ರಜ್ಞಾವಂತ ಸಮಾಜದ ಕಾರ್ಯವಾಗಬೇಕು ಎಂದು ಹೇಳಿದರು. ಅಧ್ಯಕ್ಷತೆಯನ್ನು ವಿವಿಯ ವಹಿಸಿದ್ದ ಕುಲಪತಿಗಳಾದ ಪ್ರೊ. ವಿಷ್ಣುಕಾಂತ ಎಸ್. ಚಟಪಲ್ಲಿ ಅವರು ಮಾತನಾಡಿ, ಡಾ. ಅಂಬೇಡ್ಕರ್ ಅವರು ಬಹಳಷ್ಟು ಸಾಮಾಜಿಕ ಸಮಸ್ಯೆಗಳನ್ನು ಎದುರಿಸಿ, ಸಾಮಾಜಿಕ ಸಾಮರಸ್ಯ ಹಾಗೂ ಸಮಾಜ ಸುಧಾರಣೆಗಾಗಿ ಹೋರಾಡಿದ ಮಹಾನ್ ದಾರ್ಶನಿಕರು. ಅವರು ಹೊಂದಿದ್ದ ಸಾಮಾಜಿಕ ಕಳಕಳಿ ಮತ್ತು ಆದರ್ಶಗಳನ್ನು ನಮ್ಮ ಜೀವನದಲ್ಲಿ ರೂಢಿಸಿಕೊಳ್ಳಬೇಕು ಮತ್ತು ದೇಶದ ಪ್ರಮುಖ ದಾರ್ಶನಿಕರುಗಳ ಚಿಂತನೆಗಳ ಕುರಿತಾದ ಅಧ್ಯಯನ ಮತ್ತು ಸಂಶೋಧನೆಯನ್ನು ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು, ಪ್ರಾಧ್ಯಾಪಕರು ಕೈಗೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿಶ್ವವಿದ್ಯಾಲಯದ ಕುಲಸಚಿವರಾದ ಪ್ರೊ. ಬಸವರಾಜ ಎಲ್. ಲಕ್ಕಣ್ಣವರ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಶೇಷಾಧಿಕಾರಿಗಳಾದ ಉಮೇಶ ಬಾರಕೇರ ಹಾಗೂ ವಿಶ್ವವಿದ್ಯಾಲಯದ ಬೋಧಕ, ಬೋಧಕೇತರ ಸಿಬ್ಬಂದಿ ಅವರು ಉಪಸ್ಥಿತರಿದ್ದರು. ನಿರಂಜನ ಪೂಜಾರ ಅವರು ಸ್ವಾಗತಿಸಿದರು, ಆರ್.ಡಿ.ಪಿ.ಆರ್. ವಿಭಾಗದ ಸಂಯೋಜಕರಾದ ಡಾ. ಶ್ರೀಧರ ಹಾದಿಮನಿ ಅವರು ವಂದಿಸಿದರು, ಡಾ. ಸಂತೋಷ ಪಿ.ಕೆ. ಅವರು ಕಾರ್ಯಕ್ರಮವನ್ನು ನಿರೂಪಿಸಿದರು.

## ಗ್ರಾಮೀಣಾಭಿವೃದ್ಧಿ ವಿವಿಯಲ್ಲಿ ಡಾ. ಅಂಬೇಡ್ಕರ್ ಜಯಂತಿ

ಗದಗ.ಏ.18: ಇಲ್ಲಿಯ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯದಲ್ಲಿ ಸಂವಿಧಾನ ಶಿಲ್ಪಿ ಡಾ. ಬಾಬಸಾಹೇಬ ಅಂಬೇಡ್ಕರ್‌ವರ 130ನೇ ಜಯಂತಿ ಅಂಗವಾಗಿ ವಿಶೇಷ ಉಪನ್ಯಾಸ ಕಾರ್ಯಕ್ರಮ ಜರುಗಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಶ್ರೀಧರ ನಾಡಗೇರ್ ಡಾ. ಬಾಬಸಾಹೇಬ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನಗಳನ್ನು ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಡಾ. ಅಂಬೇಡ್ಕರ್ ಅವರು ಬಹುಮುಖ ಹಾಗೂ ಪರಿಪೂರ್ಣ ವ್ಯಕ್ತಿತ್ವದವರು ಮತ್ತು ಈ ದೇಶಕಂಡ ಮಹಾನ್ ಸಮಾಜ ಸುಧಾರಣೆಯ ಹರಿಕಾರು. ಅಂಬೇಡ್ಕರ್ ಅವರನ್ನು ಕೇವಲ ಒಂದು ವರ್ಗಕ್ಕೆ ಸೀಮಿತಗೊಳಿಸದೆ, ಅವರುದೇಶಕ್ಕೆ ನೀಡಿದಕೊಡುಗೆಯನ್ನು ಸಾರ್ವತ್ರೀಕವಾಗಿಅರ್ಥೈಸುವುದು ಪ್ರಜ್ಞಾವಂತ ಸಮಾಜದ ಕಾರ್ಯವಾಗಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಮಾನ್ಯ ಕುಲಪತಿ ಪ್ರೊ. ವಿಷ್ಣುಕಾಂತಎಸ್. ಚಟಪಲ್ಲಿ ಮಾತನಾಡಿ, ಡಾ. ಅಂಬೇಡ್ಕರ್ ಅವರು ಬಹಳಷ್ಟು ಸಾಮಾಜಿಕ ಸಮಸ್ಯೆಗಳನ್ನು ಎದುರಿಸಿ, ಸಾಮಾಜಿಕ ಸಾಮರಸ್ಯ ಹಾಗೂ ಸಮಾಜ ಸುಧಾರಣೆಗಾಗಿ ಹೋರಾಡಿದ ಮಹಾನ್‌ದಾರ್ಶನಿಕರು.



ಅವರು ಹೊಂದಿದ್ದ ಸಾಮಾಜಿಕ ಕಳಕಳಿ ಮತ್ತು ಆದರ್ಶಗಳನ್ನು ನಮ್ಮಜೀವನದಲ್ಲಿ ರೂಢಿಸಿಕೊಳ್ಳಬೇಕು ಮತ್ತುದೇಶದ ಪ್ರಮುಖ ದಾರ್ಶನಿಕರುಗಳ ಚಿಂತನೆಗಳ ಕುರಿತಾದ ಅಧ್ಯಯನ ಮತ್ತು ಸಂಶೋಧನೆಯನ್ನು ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು, ಪ್ರಾಧ್ಯಾಪಕರು ಕೈಗೊಳ್ಳಬೇಕು ಎಂದು ಹೇಳಿದರು.

ವಿಶ್ವವಿದ್ಯಾಲಯದ ಕುಲಸಚಿವ ಪ್ರೊ.ಬಸವರಾಜಎಲ್. ಲಕ್ಕಣ್ಣವರ ಮಾತನಾಡಿದರು. ವಿಶೇಷಾಧಿಕಾರಿಉಮೇಶ ಬಾರಕೇರ ವಿಶ್ವವಿದ್ಯಾಲಯದ ಬೋಧಕ, ಬೋಧಕೇತರ ಸಿಬ್ಬಂದಿ, ಮುಂತಾದವರು ಉಪಸ್ಥಿತರಿದ್ದರು.

ನಿರಂಜನ ಪೂಜಾರಅವರು ಸ್ವಾಗತಿಸಿದರು, ಆರ್.ಡಿ.ಪಿ.ಆರ್. ವಿಭಾಗದ ಸಂಯೋಜಕರಾದ ಡಾ. ಶ್ರೀಧರ ಹಾದಿಮನಿ ವಂದಿಸಿದರು, ಡಾ. ಸಂತೋಷ ನಿರೂಪಿಸಿದರು.